ತುಮಕೂರು ವಿಶ್ವವಿದ್ಯಾನಿಲಯ

ಡಿವಿಜಿ ಕನ್ನಡ ಅಧ್ಯಯನ ಮತ್ತು ಸಂಶೋಧನ ಕೇಂದ್ರ

ಡಾ. ಪಿ. ಸದಾನಂದ ಮಯ್ಯ ಕಟ್ಟಡ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – 572103

15–10–2025

ಗೆ,

**ಕುಲಸಚಿವರು**

ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು

**ವಿಷಯ:** ತುಮಕೂರು ವಿಶ್ವವಿದ್ಯಾನಿಲಯದ ಜ್ಞಾನಸಿರಿ ಕ್ಯಾಂಪಸ್, ಬಿದರಕಟ್ಟೆ ಇಲ್ಲಿ ನಡೆಯುವ ವಿವಿಧ ಕಟ್ಟಡ ಉದ್ಘಾಟನಾ ಸಮಾರಂಭದ ಆಹ್ವಾನ ಪತ್ರಿಕೆ ಮುದ್ರಿಸಿ ಸರಬರಾಜು ಮಾಡಲು ದರಪಟ್ಟಿಯನ್ನು ಆಹ್ವಾನಿಸುತ್ತಿರುವ ಕುರಿತು.

**ಉಲ್ಲೇಖ:** ಸಂಖ್ಯೆ: ತುವಿ:ಅವಿ:2025–26/2107 ದಿನಾಂಕ: 15.10.2025

ಈ ಮೇಲ್ಕಂಡ ವಿಷಯ ಮತ್ತು ಉಲ್ಲೇಖ ಸಂಬಂಧಿಸಿದಂತೆ, ತುಮಕೂರು ವಿಶ್ವವಿದ್ಯಾನಿಲಯದ ಜ್ಞಾನಸಿರಿ ಕ್ಯಾಂಪಸ್, ಬಿದರಕಟ್ಟೆ ಇಲ್ಲಿ ನಡೆಯುವ ವಿವಿಧ ಕಟ್ಟಡ ಉದ್ಘಾಟನಾ ಸಮಾರಂಭದ ಆಹ್ವಾನ ಪತ್ರಿಕೆ ಮುದ್ರಿಸಿ ಸರಬರಾಜು ಮಾಡಲು ಈ ಕೆಳಕಂಡಂತೆ ದರಪಟ್ಟಿಯನ್ನು ಆಹ್ವಾನಿಸಲಾಗಿದೆ.

| Sl.No | Particulars | Quantity | Per Piece Rs. | Total (Including CGST & SGST) |
|---|---|---|---|---|
| 1. | Invitation Cards<br>Digital Print on Light Gold Metallic Board 300 GSM, Cover Multi Colour offset print on 170 GSM Art Paper Size : 8"X8"<br>Including Design & other charges | 1000 | | |

ಷರತ್ತುಗಳು:

1. ದರಪಟ್ಟಿಯನ್ನು ಸಲ್ಲಿಸಲು ಕೊನೆಯ ದಿನಾಂಕ: 18–10–2025 ರ ಸಂಜೆ 4.00 ಗಂಟೆಯವರೆಗೆ
2. ದರಪಟ್ಟಿಯನ್ನು ಸಲ್ಲಿಸುವ ಮುಂಚೆ ಮಾದರಿಯನ್ನು ಪ್ರೊ. ನಿತ್ಯಾನಂದ ಬಿ ಶೆಟ್ಟಿ, ಡಿವಿಜಿ ಕನ್ನಡ ಅಧ್ಯಯನ ಮತ್ತು ಸಂಶೋಧನ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ ಇವರೊಂದಿಗೆ ಪರಿಶೀಲಿಸುವದು.
3. ದರಪಟ್ಟಿಯನ್ನು ಪ್ರೊ. ನಿತ್ಯಾನಂದ ಬಿ ಶೆಟ್ಟಿ, ಡಿವಿಜಿ ಕನ್ನಡ ಅಧ್ಯಯನ ಮತ್ತು ಸಂಶೋಧನ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ ಇವರಿಗೆ ಮುದ್ದಾಂ ಅಥವಾ ಅಂಚೆಯ ಮೂಲಕ ತಲುಪಿಸತಕ್ಕದ್ದು. ಅಂಚೆಯ ವಿಳಂಬಕ್ಕೆ ವಿಶ್ವವಿದ್ಯಾನಿಲಯವು ಜವಾಬ್ದಾರರಾಗುವುದಿಲ್ಲ
4. ಸರಬರಾಜು ಸಂಸ್ಥೆಯವರು ತಮ್ಮ ಸಂಸ್ಥೆಯ GST No & PAN No. ದಾಖಲೆಗಳನ್ನು ದರಪಟ್ಟಿಯ ಜೊತೆಗೆ ಲಗತ್ತಿಸಬೇಕು.
5. ದರಪಟ್ಟಿಯನ್ನು ಯಾವುದೇ ಕಾರಣ ನೀಡದೇ ಅಂಗೀಕರಿಸುವ ಅಥವಾ ತಿರಸ್ಕರಿಸುವ ಹಕ್ಕನ್ನು ವಿಶ್ವವಿದ್ಯಾನಿಲಯ ಕಾಯ್ದಿರಿಸಿಕೊಂಡಿದೆ.
6. ಮುದ್ರಣ ಸಾಮಗ್ರಿಗಳ ಸರಬರಾಜು ವೆಚ್ಚವನ್ನು ಸರಬರಾಜುದಾರರೇ ಭರಿಸಬೇಕು.
7. ದರಪಟ್ಟಿಯಲ್ಲಿ ನಮೂದಿಸಿರುವ ಮುದ್ರಣ ಸಾಮಗ್ರಿಗಳ ಪ್ರಮಾಣವನ್ನು ಹೆಚ್ಚಿಸುವ ಅಥವಾ ಕಡಿಮೆಗೊಳಿಸುವ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿದೆ.
8. ಷರತ್ತು ಬದ್ಧ ದರಪಟ್ಟಿಗಳನ್ನು ಪರಿಗಣಿಸಲಾಗುವುದಿಲ್ಲ ಮತ್ತು ಪ್ರತಿ ಸಂಸ್ಥೆಯವರು ಏಕೈಕ ದರಪಟ್ಟಿಯನ್ನು ಮಾತ್ರ ಸಲ್ಲಿಸುವುದು.
9. ಬಿಲ್ಲನ್ನು ದ್ವಿ–ಪ್ರತಿಯಲ್ಲಿ ಪ್ರೊ. ನಿತ್ಯಾನಂದ ಬಿ ಶೆಟ್ಟಿ, ಡಿವಿಜಿ ಕನ್ನಡ ಅಧ್ಯಯನ ಮತ್ತು ಸಂಶೋಧನ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ ಇವರ ಹೆಸರಿಗೆ ಸಲ್ಲಿಸಬೇಕು.
10. ಆದೇಶ ನೀಡಿದ ಒಂದು ವಾರದೊಳಗಾಗಿ ಸಾಮಗ್ರಿಗಳನ್ನು ಸರಬರಾಜು ಮಾಡಬೇಕು ಮತ್ತು ಸರಬರಾಜು ಆದೇಶದಲ್ಲಿ ನೀಡುವ ಎಲ್ಲಾ ಷರತ್ತುಗಳನ್ನು ಪಾಲಿಸಬೇಕು.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ

ಪ್ರೊ. ನಿತ್ಯಾನಂದ ಬಿ ಶೆಟ್ಟಿ
ಹಿರಿಯ ಪ್ರಾಧ್ಯಾಪಕರು
ಡಿವಿಜಿ ಕನ್ನಡ ಅಧ್ಯಯನ ಮತ್ತು ಸಂಶೋಧನ ಕೇಂದ್ರ
ತುಮಕೂರು ವಿಶ್ವವಿದ್ಯಾನಿಲಯ
ಬಿ ಹೆಚ್ ರಸ್ತೆ, ತುಮಕೂರು - 572 103

ಪ್ರತಿಗಳು:

1. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು (ಇಂದೇ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು)